ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಮಹಿಳೆಯರು, ಅಶಕ್ತರು ಮತ್ತು ಬಡವರಿಗೆ ನೀಡುತ್ತಿರುವ ಸೇವೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

956 (1042) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮಹಿಳೆಯರು, ಬಡವರು ಮತ್ತು ಅಶಕ್ತರಿಗೆ ಒದಗಿಸುತ್ತಿರುವ ಆರೋಗ್ಯ ಸೇವೆಗಳು ಯಾವುವು; ಈ ಸೇವೆಗಳ ಸೌಲಭ್ಯ ಪಡೆಯಲು ಇರುವ ಮಾನದಂಡಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಖಾಯಿಲೆಗಳು ಹರಡದಂತೆ/ಬರದಂತೆ ತಡೆಗಟ್ಟಲು ಇರುವ ಮಾರ್ಗಗಳ ಬಗ್ಗೆ ಮತ್ತು ತುರ್ತು ಆರೋಗ್ಯ ಪರಿಸ್ಥಿತಿಗಳನ್ನುಎದುರಿಸಲು ಅನುಕೂಲವಾಗುವಂತೆ ಸಾರ್ವಜಕರಿಗೆ ಅರಿವು ಮೂಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಈ ಕ್ರಮಗಳಿಂದ ಸಾರ್ವಜನಕರಿಗೆ ಅನುಕೂಲವಾ ಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ? (ವಿವರ ನೀಡುವುದು)